# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ./310/2022–23

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ:06.08.2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:–** ದಿನಾಂಕ. 06.08.2022 ರಂದು ನಡೆದ ವಾರ್ಡ್ ಸಂಖ್ಯೆ. 137 ರ ಸಮಿತಿ ಸಭೆಯ ನಡವಳಿಗಳು.
**ಉಲ್ಲೇಖ:–** ಆಯುಕ್ತರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020/21, ದಿ. 21.09.2020

**ಸಭೆಗೆ ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು**

- ಶ್ರೀಮತಿ ಮುನಿಲಕ್ಷ್ಮಿ – ಅಧ್ಯಕ್ಷರು
- ಶ್ರೀ ಪವನ್ ಕುಮಾರ್ ಯಾದವ್, – ಕಾರ್ಯದರ್ಶಿ ಮತ್ತು ಸಂಚಾಲಕರು, ಸ.ಅ, ವಾರ್ಡ್ ಸಂ.137
- ಶ್ರೀಮತಿ ಹೇಮಲತಾ ಸಹಾಯಕ ಕಾರ್ಯಪಾಲಕ ಅಭಿಯಂತರು–ಕಾಟನ್‌ಪೇಟೆ ಉಪ–ವಿಭಾಗ

ವಾರ್ಡ್ ಸಮಿತಿಯ ಅಧ್ಯಕ್ಷರು ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಸ್ವಾಗತವನ್ನು ಕೋರುತ್ತಾ ಸಭೆಯನ್ನು ಪ್ರಾರಂಭಿಸಲು ತಿಳಿಸಿದರು. ಸಭೆಯಲ್ಲಿ ಹಾಜರಿದ ಸದಸ್ಯರು ಹಾಗೂ ಪಾಲಿಕೆಯ ಅಧಿಕಾರಿಗಳು ತಮ್ಮ ಪರಿಚಯ ನೀಡಿ ಸಭೆಯನ್ನು ಪಾರಂಭಲಾಯಿಸಿತು. .

- ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀಮತಿ.ಮುನ್ನಿಲಕ್ಷ್ಮೀ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.
- ಚರಂಡಿ ಹಾಗೂ ಚರಂಡಿರಲ್ಲಿ ಹೂಳು ತಗೆಸಲು ಮತ್ತು ದುರಸ್ಥಿಪಡಿಸುವಂತೆ ವಾರ್ಡ್ ಸಭೆಯಲ್ಲಿ ಸದಸ್ಯರು ಕೋರಿರುತ್ತಾರೆ. ಅದರಂತೆ ಕ್ರಮ ವಹಿಸಲಾಗುವುದು.
- ಕಾಟನ್‌ಪೇಟೆ ಮತ್ತು ಎಂ.ಆರ್.ಲೇನ್ ಗಲ್ಲಿಯಲ್ಲಿನ ಕಸದ ಸಮಸ್ಯೆ ಬಗ್ಗೆ ಚರ್ಚಿಸಲಾಗಿದೆ ಹಾಗೂ ಈ ಸಮಸ್ಯೆಯ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಯಾ ಇಲಾಖೆಯವರಿಗೆ ತಿಳಿಸಲಾಗಿದೆ.
- ರಸ್ತೆಯ ಅಕ್ಕಪಕ್ಕದಲ್ಲಿನ ಡೇಬಿರಿಸ್ ತೆರುವುಗೊಳಿಸಲು ಸಾರ್ವಜನಿಕರು ಕೋರಿರುತ್ತಾರೆ. ಅದರಂತೆ ಕ್ರಮ ವಹಿಸಲಾಗುವುದು.
- ಎಂ.ಆರ್.ಲೇನ್ ಮತ್ತು ಪಿ.ಆರ್.ಲೇನ್ ರಸ್ತೆ ಅಭಿವೃಧಿ ಸಾರ್ವಜನಿಕರು ಕೋರಿರುತ್ತಾರೆ. ಅದರಂತೆ ಕ್ರಮ ವಹಿಸಲಾಗುವುದು.
- ವಾರ್ಡಿನಲ್ಲಿ ದುರಸ್ಥಿಗೊಂಡಿರುವ ವಿದ್ಯುತ್ ದೀಪಗಳನ್ನು ಸರಿಪಡಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.

ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನಿರ್ಣಯ:-

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತಿರ್ಮಾನಿಸಿತ್ತು.

ಸಹಿ/-
ಕಾರ್ಯದರ್ಶಿ
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ.137
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು :**

- ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
- ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
- ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ
- ಕಛೇರಿ ಕಡತಕ್ಕೆ.